## 76. ಕೆಆರ್‌ಎಸ್ ಬೃಂದಾವನ ವಿಶ್ವದರ್ಜೆಗೆ

ಕೆಆರ್‌ಎಸ್ ಬೃಂದಾವನವನ್ನು ವಿಶ್ವದರ್ಜೆಗೇರಿಸಲು ಚಿಂತನೆ ನಡೆಸಲಾಗಿದೆ ಎಂದು ಮುಖ್ಯಮಂತ್ರಿಯವರು ಹೇಳಿದರು.

ಶ್ರೀರಂಗಪಟ್ಟಣದ ಕೃಷ್ಣರಾಜಸಾಗರ ಜಲಾಶಯಕ್ಕೆ ಬಾಗಿನ ಅರ್ಪಿಸಿ ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೃಷ್ಣರಾಜಸಾಗರ ಜಲಾಶಯಕ್ಕೆ ಬೃಂದಾವನ ಮೆರುಗು ತಂದಿದ್ದು, ಸೌಂದರ್ಯ ಹೆಚ್ಚಿಸಿದೆ. ಇಲ್ಲಿಗೆ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಾರೆ. ಆದ್ದರಿಂದ ಇದನ್ನು ವಿಶ್ವದರ್ಜೆಗೇರಿಸಲು ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು.

**ಕ್ರೆಸ್ಟ್ ಗೇಟ್‌ಗಳ ಅಭಿವೃದ್ಧಿ:** ಜಲಾಶಯದ ಹಳೆಯ ಕ್ರೆಸ್ಟ್ ಗೇಟ್‌ಗಳನ್ನು ಅಭಿವೃದ್ಧಿಪಡಿಸಲಾಗಿದೆ. ಸುಮಾರು ರೂ.8.40 ಕೋಟಿ ವೆಚ್ಚದಲ್ಲಿ 16 ಗೇಟ್‌ಗಳನ್ನು ಅಭಿವೃದ್ಧಿಪಡಿಸಲಾಗಿದೆ.

**28 ನೀರಾವರಿ ಯೋಜನೆ ಕಾಮಗಾರಿ ಪ್ರಗತಿ:** ನಮ್ಮ ಸರ್ಕಾರ ರಾಜ್ಯದಲ್ಲಿ ನೀರಾವರಿ ಯೋಜನೆಗೆ ಪ್ರಥಮ ಆದ್ಯತೆ ನೀಡಿದೆ. ರಾಜ್ಯದಲ್ಲಿ ಸುಮಾರು ರೂ.74 ಸಾವಿರ ಕೋಟಿ ವೆಚ್ಚದಲ್ಲಿ ಕುಡಿಯುವ ನೀರು, ಏತ ನೀರಾವರಿ, ಕೃಷಿ ಚಟುವಟಿಕೆಗಳಿಗೆ ನೀರೊದಗಿಸುವ ಹಾಗೂ ಕೆರೆ–ಕಟ್ಟೆಗಳಿಗೆ ನೀರು ತುಂಬಿಸುವ 28 ಕಾಮಗಾರಿಗಳನ್ನು ನಡೆಸಲಾಗುತ್ತಿದ್ದು, ಈಗಾಗಲೇ ಕಾಮಗಾರಿಗಳು ಪ್ರಗತಿಯಲ್ಲಿದೆ ಎಂದು ತಿಳಿಸಿದರು.

**ಮೇಕೆದಾಟು ಯೋಜನೆ ಪ್ರಾರಂಭಕ್ಕೆ ಕ್ರಮ:** ಕಾವೇರಿ ನದಿ ನೀರು ಸಂರಕ್ಷಿಸಿ ವಿದ್ಯುತ್ ಉತ್ಪಾದನೆ, ಕೃಷಿ ಹಾಗೂ ಕುಡಿಯುವ ನೀರಿನ ಉದ್ದೇಶಕ್ಕೆ ರೂಪಿಸಲಾಗಿರುವ ಮೇಕೆದಾಟು ಯೋಜನೆ ಪ್ರಾರಂಭಕ್ಕೆ ಕ್ರಮ ವಹಿಸಲಾಗುವುದು. ಈಗಾಗಲೇ ಈ ಪ್ರಸ್ತಾವನೆ ಕೇಂದ್ರ ಸರ್ಕಾರದ ಮುಂದಿದ್ದು, ಅನುಮತಿ ಪಡೆದು ಯೋಜನೆ ರೂಪಿಸಲಾಗುವುದು ಎಂದರು.

**ಎಲ್ಲ ಜಲಾಶಯಗಳು ಭರ್ತಿ:** ರಾಜ್ಯದ ಎಲ್ಲ ಜಲಾಶಯಗಳು, ಕೆರೆ ಕಟ್ಟೆಗಳು ತುಂಬಿವೆ. ಅದರಂತೆ ಕೆಆರ್‌ಎಸ್ ಜಲಾಶಯ ನಿರ್ಮಾಣವಾದಾಗಿನಿಂದ ಸುಮಾರು 36 ಬಾರಿ ತುಂಬಿದೆ. ಕಳೆದ 3 ವರ್ಷಗಳಿಂದ ಸತತವಾಗಿ ಗರಿಷ್ಠ ಮಟ್ಟ ತುಂಬಿದ್ದು, ಈ ಭಾಗದ ಜನರ ಕುಡಿಯುವ ನೀರು ಹಾಗೂ ಕೃಷಿ ಚಟುವಟಿಕೆಗಳಿಗೆ ನೀರೊದಗಿಸುತ್ತಾ ಬಂದಿದೆ. ಜಲಾಶಯಕ್ಕೆ ನಾನು 5ನೇ ಬಾರಿ ಬಾಗಿನ ಅರ್ಪಿಸಿದ್ದು, ಸಂತಸ ತಂದಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

**ಕಿರು ಪುಸ್ತಕ ಬಿಡುಗಡೆ:** ಈ ಬಾರಿ ಉತ್ತಮ ಮಳೆಯಾಗಿದ್ದು, ಬೆಳೆಯಾಗುವ ನಿರೀಕ್ಷೆ ಇದೆ. ರಾಜ್ಯದ ಕೆಲವು ಕಡೆ ಅತಿವೃಷ್ಟಿ ಹಾಗೂ ಅನಾವೃಷ್ಟಿ ಉಂಟಾಗಿದೆ. ಆ ಭಾಗದ ಜನರಿಗೆ ಪರಿಹಾರ ವಿತರಿಸಲು ಸರ್ಕಾರ ಈಗಾಗಲೇ ಒಂದು ವರ್ಷದ ಸಾಧನೆಯ ಕಿರುಪುಸ್ತಕವನ್ನು ಬಿಡುಗಡೆ ಮಾಡಿತು. ಜಿಲ್ಲಾ ಉಸ್ತುವಾರಿ ಸಚಿವ ಕೆ.ಸಿ.ನಾರಾಯಣಗೌಡ, ಸಚಿವರಾದ ರಮೇಶ್ ಜಾರಕಿಹೋಳಿ, ಎಸ್.ಟಿ.ಸೋಮಶೇಖರ್, ಶಾಸಕರಾದ ಸಿ.ಎಸ್.ಪುಟ್ಟರಾಜು, ರವೀಂದ್ರ ಶ್ರೀಕಂಠಯ್ಯ, ಎಂ.ಶ್ರೀನಿವಾಸ್, ಕೆ.ಅನ್ನದಾನಿ, ಎನ್. ಅಪ್ಪಾಜಿಗೌಡ, ಕೆ.ಟಿ.ಶ್ರೀಕಂಠೇಗೌಡ, ನಾಗೇಂದ್ರ, ಸಂಸದರಾದ ಸುಮಲತಾ ಅಂಬರೀಷ್, ಪ್ರತಾಪ್‌ಸಿಂಹ, ಮೈಸೂರಿನ ಮೇಯರ್ ತಸ್ಲೀಮಾ ಬಾನು, ಮಾಜಿ ಸಚಿವ ಸಿ.ಎಚ್.ವಿಜಯಶಂಕರ್, ಜಿಲ್ಲಾಧಿಕಾರಿ, ಡಾ: ಎಂ.ವಿ.ವೆಂಕಟೇಶ್, ಜಿಪಂ.ಸಿಇಒ ಎಂ.ಎಸ್.ಜುಲ್ಫಿಖಾರ್ ಉಲ್ಲಾ, ತಹಶೀಲ್ದಾರ್ ರೂಪ ಉಪಸ್ಥಿತರಿದ್ದರು.

ಆಧಾರ:ವಿಶ್ವವಾಣಿ, ದಿನಾಂಕ:22.08.2020